# ಕಲ್ಲಡ್ಕ ಶ್ರೀರಾಮ ವಿದ್ಯಾಕೇಂದ್ರದಲ್ಲಿ "ಅಯೋಧ್ಯಾ" ಕಟ್ಟಡ ಉದ್ಘಾಟನೆ

ಶ್ರೀರಾಮ ವಿದ್ಯಾಕೇಂದ್ರವು ರಾಷ್ಟ್ರೀಯ ವಿಚಾರಧಾರೆಯೊಂದಿಗೆ ವಿದ್ಯಾರ್ಥಿಗಳಲ್ಲಿ ಆದರ್ಶವಾದ ಧ್ಯೇಯೋದ್ದೇಶಗಳನ್ನು ಬೆಳೆಸುವ ಸಂಸ್ಥೆಯಾಗಿದೆ ಎಂದು ಬೆಂಗಳೂರಿನ ಸೆಂಚುರಿ ಗ್ರೂಫ್ ನ ಉದ್ಯಮಿ ದಯಾನಂದ ಪೈ ಹೇಳಿದರು.

ಅವರು ಕಲ್ಲಡ್ಕ ಶ್ರೀರಾಮ ವಿದ್ಯಾಕೇಂದ್ರದಲ್ಲಿ ಪ್ರೌಢಶಾಲೆಯ ನೂತನ ಬಹುಮಹಡಿ ಕಟ್ಟಡ "ಅಯೋಧ್ಯಾ" ವನ್ನು ಉದ್ಘಾಟಿಸಿ ಬಳಿಕ ಸಮಾರಂಭದಲ್ಲಿ ಮಾತನಾಡಿ ಶ್ರೀರಾಮ ವಿದ್ಯಾಕೇಂದ್ರವು ಒಂದು ವಿಭಿನ್ನ ,ವಿಶಿಷ್ಟ ಸಂಸ್ಥೆಯಾಗಿದ್ದು ರಾಷ್ಟ್ರೀಯತೆಯ ವಾತಾವರಣ ಇಲ್ಲಿದೆ.ವಿದ್ಯಾರ್ಥಿಗಳು ಇದರ ಪ್ರಯೋಜನವನ್ನು ಪಡೆದುಕೊಳ್ಳಬೇಕು ಎಂದು ಶುಭಹಾರೈಸಿದರು.

ಈ ದೇಶವು ಪ್ರಗತಿಯಾಗಬೇಕಾದರೆ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ. ವಿದ್ಯಾಸಂಸ್ಥೆಗಳು ಕೇವಲ ಡಾಕ್ಟರ್ , ಇಂಜಿನಿಯರ್‌ಗಳ ನಿರ್ಮಾಣ ಮಾಡುವ ಕೇಂದ್ರವಾಗದೇ ಸಮಾಜ ಮತ್ತು ದೇಶದ ಬಗ್ಗೆ ಕಾಳಜಿ ವಹಿಸುವ ವಿದ್ಯಾರ್ಥಿಗಳನ್ನು ನಿರ್ಮಾಣ ಮಾಡುವ ಕಡೆಗೆ ಗಮನಹರಿಸಬೇಕು ಎಂದ ಅವರು ಅನ್ನದಾನಕ್ಕಿಂತ ವಿದ್ಯಾದಾನವೇ ಶ್ರೇಷ್ಠವಾದುದು ಎಂದು ನುಡಿದರು.

ಈ ಸಂದರ್ಭದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಟಿ.ಸಿ. ಶಿವಶಂಕರ ಮೂರ್ತಿ ,ಹಿರಿಯ ಪ್ರಚಾರಕ ಸು.ರಾಮಣ್ಣ, ಎಂ.ಬಿ.ಪುರಾಣಿಕ್ ವಿಶ್ವಹಿಂದು ಪರಿಷತ್ ಅಧ್ಯಕ್ಷ , ಸಾಂಸದ ನಳಿನ್ ಕುಮಾರ್ ಕಟೀಲ್ , ಶಾಸಕ ಕ್ಯಾಪ್ಟನ್ ಗಣೇಶ್ ಕಾರ್ನಿಕ್ , ಕಜಂಪಾಡಿ ಸುಬ್ರಹ್ಮಣ್ಯ ಭಟ್ ,ವಿದ್ಯಾಂಗ ಉಪನಿರ್ದೇಶಕರಾದ ಚಾಮೇಗೌಡ , ಕ್ಷೇತ್ರ ಶಿಕ್ಷಣಾಧಿಕಾರಿ ಸುಧಾಕರ್ ಕೆ , ವಿದ್ಯಾಕೇಂದ್ರದ ಅಧ್ಯಕ್ಷ ಬಿ.ನಾರಾಯಣ ಸೋಮಯಾಜಿ ಮೊದಲಾದವರು ಉಪಸ್ಥಿತರಿದ್ದರು.

ವಿದ್ಯಾಕೇಂದ್ರದ ಸಂಚಾಲಕ ಡಾ.ಪ್ರಭಾಕರ ಭಟ್ ಸ್ವಾಗತಿಸಿ ಪ್ರಸ್ತಾವನೆ ಗೈದರು. ಶಾಲಾ ಮುಖ್ಯೋಪಾಧ್ಯಾಯ ವಸಂತ ಮಾಧವ ವಂದಿಸಿದರು.